# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 19.03.2011**

## *ವಾರ್ಡ್-17ರ ಜೆ.ಪಿ. ಪಾರ್ಕ್‌ನಲ್ಲಿ 199 ಫಲಾನುಭವಿಗಳಿಗೆ ಮನೆಗಳನ್ನು ಹಸ್ತಾಂತರಿಸುವುದು ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನಾ ಸಮಾರಂಭ*

ಇಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್-17 ಜೆ.ಪಿ. ಪಾರ್ಕ್‌ನಲ್ಲಿ 22.75% ಕಲ್ಯಾಣ ಯೋಜನೆಯ ಅಡಿಯಲ್ಲಿ ನಿರ್ಮಿಸಲಾದ 199 ಮನೆಗಳನ್ನು ಫಲಾನುಭವಿಗಳಿಗೆ ಹಸ್ತಾಂತರಿಸುವ ಮತ್ತು ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನಾ ಸಮಾರಂಭವನ್ನು ಮಾನ್ಯ ಗೃಹ ಮತ್ತು ಸಾರಿಗೆ ಸಚಿವರಾದ ಶ್ರೀ ಆರ್. ಅಶೋಕ್ ರವರು ನೆರವೇರಿಸಿದರು.

ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಮಾನ್ಯ ಸಚಿವರು ಜೆ.ಪಿ. ಪಾರ್ಕ್ ವಾರ್ಡ್‌ನಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ನಿವಾಸಿಗರಿಗೆ ಸುಮಾರು 3 ಲಕ್ಷ ರೂಪಾಯಿಗಳ ವೆಚ್ಚದಲ್ಲಿ ನಿರ್ಮಿಸಲಾದ ಮನೆಗಳು ತುಂಬಾ ಆಕರ್ಷಕವಾಗಿದ್ದು, ನಗರದ ಬೇರೆ ವಾರ್ಡ್‌ಗಳಿಗೆ ಮಾದರಿಯಾಗಿವೆ ಎಂದು ತಿಳಿಸುತ್ತಾ, ವಾರ್ಡ್‌ನಲ್ಲಿ ನಿರ್ಮಿಸಲಾದ ಹಿರಿಯ ನಾಗರಿಕರ ಕೇಂದ್ರ ಮತ್ತು ಸಂಪರ್ಕ ಕೇಂದ್ರ ಹಾಗೂ ಇನ್ನಿತರೆ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಮೆಚ್ಚುಗೆಯನ್ನು ವ್ಯಕ್ತಪಡಿಸಿದರು. ಶ್ರೀ ಬಿ.ಆರ್. ನಂಜುಂಡಪ್ಪರವರು ಪಾಲಿಕೆಯಲ್ಲಿ ಹಿರಿಯ ಅನುಭವಿ ಸದಸ್ಯರಾಗಿದ್ದು ಉತ್ತಮ ಅಭಿವೃದ್ಧಿ ಕೆಲಸಗಳನ್ನು ಕೈಗೊಂಡಿದ್ದಾರೆ ಎಂದು ಹೇಳಿದರು.

ಗಿಡಮರಗಳಿಂದ ಒಳ್ಳೆಯ ಆಮ್ಲಜನಕ ಸಿಗುವುದರಿಂದ, ಮುಂಬರುವ ದಿನಗಳಲ್ಲಿ ನಗರದ ಎಲ್ಲಾ ವಾರ್ಡ್‌ಗಳಲ್ಲಿ ಪಾರ್ಕ್‌ಗಳ ನಿರ್ಮಾಣವನ್ನು ತಡೆದು, ಗಿಡಮರಗಳನ್ನು ನೆಡಲು ಹಾಗೂ ಮಕ್ಕಳಿಗೆ ಪಾಠದೊಂದಿಗೆ ಆಟವನ್ನು ಆಡಲು ಆಟದ ಮೈದಾನಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಬೇಕೆಂದು ಈಗಾಗಲೇ ಪೂಜ್ಯ ಮಹಾಪೌರರಿಗೆ ಹಾಗೂ ಪಾಲಿಕೆಯ ಆಯುಕ್ತರಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ತದನಂತರ ಪ್ರಸ್ತಾವಿಕವಾಗಿ ಮಾತನಾಡಿದ ಶ್ರೀ ಬಿ.ಆರ್. ನಂಜುಂಡಪ್ಪರವರು ತಮ್ಮ ವಾರ್ಡ್‌ನಲ್ಲಿ ಈಗಾಗಲೇ ನಿರ್ಮಿಸಲಾದ ಒಟ್ಟು 199 ಮನೆಗಳಲ್ಲಿ ಪೂರ್ಣಪುರದಲ್ಲಿ 54, ಅಕ್ಕಿಯಪ್ಪ ಗಾರ್ಡನ್‌ನಲ್ಲಿ-89, ಡಿ. ರಾಮಯ್ಯ ಕಾಲೋನಿಯಲ್ಲಿ 56 ಮನೆಗಳನ್ನು ನಿರ್ಮಿಸಲಾಗಿದೆ. ಹಾಗೂ ಚೌಡೇಶ್ವರಿ ಬಸ್ ನಿಲ್ದಾಣದ ಬಳಿ ಪಾಲಿಕೆಯ ಸಂಪರ್ಕ ಕೇಂದ್ರ, ಗೋಕುಲ ಬಡಾವಣೆಯ ಒಂದನೇ ಹಂತ, ಒಂದನೇ ಘಟ್ಟದಲ್ಲಿ ಪಾಲಿಕೆಯ ಸಂಪರ್ಕ ಕೇಂದ್ರ, ಹಾಗೂ ಹಿರಿಯ ನಾಗರಿಕರ ಕೇಂದ್ರ, ಜೆ.ಪಿ ಉದ್ಯಾನವನದ ಮುಂದಿನ ಪಾದಚಾರಿ ಮಾರ್ಗ ಅಭಿವೃದ್ಧಿ ಪಡಿಸುವ ಬಗ್ಗೆ ತಿಳಿಸುತ್ತಾ, ತಮ್ಮ ವಾರ್ಡ್ ಬೆಂಗಳೂರಿಗೆ ಮಾದರಿಯಾಗಿದ್ದು ಮುಂಬರುವ ದಿನಗಳಲ್ಲಿ ಇನ್ನೂ ಹೆಚ್ಚಿನ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು. ಇದಕ್ಕೆ ಸ್ಥಳೀಯ ನಿವಾಸಿಗಳ ಸಹಕಾರ ಅಗತ್ಯವಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಪಾಲಿಕೆಯ ಮಹಿಳಾ ಕಾಲೇಜು ವಿದ್ಯಾರ್ಥಿಗಳಿಗೆ ಸ್ವೆಟರ್‌ಗಳನ್ನು ಸಹ ವಿತರಿಸಲಾಯಿತು.

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸ್ಥಾಯಿ ಸಮಿತಿ ಅಧ್ಯಕ್ಷರಾದ ಶ್ರೀ ಲಕ್ಷ್ಮೀಕಾಂತ ರೆಡ್ಡಿ, ಪಾಲಿಕೆ ಸದಸ್ಯರಾದ ಶ್ರೀ ವೆಂಕಟೇಶ್ ಬಾಬು, ಪಾಲಿಕೆಯ ಅಧಿಕಾರಿಗಳು ಹಾಗೂ ಸ್ಥಳೀಯ ಗಣ್ಯ ವ್ಯಕ್ತಿಗಳು ಉಪಸ್ಥಿತರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 19.03.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ದಿನಾಂಕ: 15.03.2011 ರಿಂದ ಪ್ಲಾಸ್ಟಿಕ್ ತ್ಯಾಜ್ಯ ನಿಯಮ 2011ರ ಅನುಷ್ಠಾನವನ್ನು ಮಾಡಲಾಗುತ್ತಿದ್ದು, 40 ಮೈಕ್ರಾನ್‌ಗಿಂತ ಕಡಿಮೆ ದಪ್ಪವಿರುವ ಪ್ಲಾಸ್ಟಿಕ್ ಅನ್ನು ನಿಷೇಧಿಸಲಾಗಿದ್ದು, ದಿನಾಂಕ: 15.03.2011 ರಿಂದ 18.03.2011ರ ವರೆಗೆ ಪಶ್ಚಿಮ ವಲಯದಲ್ಲಿ ವಿವಿಧ ತಂಡಗಳು ಸುಮಾರು 513 ಅಂಗಡಿಗಳನ್ನು ತಪಾಸಣೆ ಮಾಡಿ, 40 ಮೈಕ್ರಾನ್‌ಗಿಂತ ಕಡಿಮೆ ದಪ್ಪವಿರುವ ಪ್ಲಾಸ್ಟಿಕ್ ಅನ್ನು ನಿಯಮ ಬಾಹಿರವಾಗಿ ಶೇಖರಿಸಿಟ್ಟ ಸುಮಾರು 80.25 ಕೆ.ಜಿ.ಗಳಷ್ಟು ಜಪ್ತಿ ಮಾಡಿ ವಶಕ್ಕೆ ತೆಗೆದುಕೊಳ್ಳಲಾಗಿದೆಂದು ಅಧೀಕ್ಷಕ ಅಭಿಯಂತರರು (ಪಶ್ಚಿಮ) ವಲಯ ರವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**